(ಆ) ಕೆ.ಎಸ್.ಹೆಚ್.ಡಿ.ಎ. ಎಕ್ಸಿಕ್ಯೂಟಿವ್ ಕಮಿಟಿ ಸಭೆಯ ಈ ಪ್ರಸ್ತಾವನೆಯನ್ನು ತಿರಸ್ಕರಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಹಾಗೂ ಸಕ್ಕರೆ ಸಚಿವರು)

(ಅ) ಕರ್ನಾಟಕ ರಾಜ್ಯ ತೋಟಗಾರಿಕೆ ಅಭಿವೃದ್ಧಿ ಏಜೆನ್ಸಿಯ 8ನೇ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸದರಿ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ.

(ಆ) ಹೌದು ಸದರಿ ಕಾಲೇಜಿಗೆ ಸ್ಥಳಾವಕಾಶ ಕಲ್ಪಿಸುವ ಬಗ್ಗೆ ಪರ್ಯಾಯ ವ್ಯವಸ್ಥೆ ಮಾಡುವ ವಿಷಯ ಶಿಕ್ಷಣ ಇಲಾಖೆಗೆ ಸಂಬಂಧಿಸಿರುತ್ತದೆ.

ರಾಜ್ಯದಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಸಾಗಾಣಿಕೆ

ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) :-

251(624) ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :-

(ಅ) ರಾಜ್ಯದಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಸಾಗಾಣಿಕೆ ಮಾಡಲು ಸರ್ಕಾರ ಸಾರ್ವಜನಿಕರಿಗೆ ಅನುಮತಿ ನೀಡಿದೆಯೇ ;

(ಆ) ಆಫ್ರಿಕನ್ ಕ್ಯಾಟ್ ಫಿಶ್‌ನ್ನು ಅಕ್ರಮವಾಗಿ ಸಾಕಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಮೀನುಗಳು ನದಿ ಮತ್ತು ಕೆರೆಗಳಿಗೆ ಬಿತ್ತನೆಯಾದರೆ ಜಲಚರಗಳ ಸಂತತಿ ನಾಶವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅಕ್ರಮವಾಗಿ ಸಾಕಾಣಿಕೆ ಮಾಡುವವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಈ ರೀತಿ ಅಕ್ರಮ ಸಾಕಾಣಿಕೆ ಪ್ರಕರಣಗಳು ಎಷ್ಟು ದಾಖಲಾಗಿವೆ (ವಿವರಗಳನ್ನು ನೀಡುವುದು) ?

ಶ್ರೀ ಆನಂದ ವಸಂತ ಆಸ್ನೋಟಿಕರ್ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು):–

(ಅ) ಇಲ್ಲ

(ಆ) ಹೌದು

(ಇ) ಹೌದು

(ಈ) ಹೌದು

(ಉ) ಒಂದು ಪ್ರಕರಣ ದಾಖಲಾಗಿರುತ್ತದೆ. ಚಿಕ್ಕಬಳ್ಳಾಪುರ ಜಿಲ್ಲೆಯ, ಚಿಂತಾಮಣಿ ತಾಲ್ಲೂಕಿನ ಚಿನ್ನಸಂದ್ರ ಗ್ರಾಮದಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಸಾಗಾಣಿಕೆ ಮಾಡುತ್ತಿದ್ದ ಪ್ರಕರಣ ದಿನಾಂಕ: 20–7–2009 ರಂದು ನಡೆದಿದ್ದು, ಮೀನುಗಾರಿಕೆ ಇಲಾಖಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಆಫ್ರಿಕನ್ ಕ್ಯಾಟ್ ಫಿಶ್‌ಗಳನ್ನು ನಾಶಪಡಿಸುತ್ತಾರೆ.

UGD ಕಾಮಗಾರಿ

ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) :–

252(625) ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ, ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ಚಿಕ್ಕಬಳ್ಳಾಪುರ ನಗರದಲ್ಲಿ ಯು.ಜಿ.ಡಿ. ಕಾಮಗಾರಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯು.ಜಿ.ಡಿ. ಕಾಮಗಾರಿಗಾಗಿ ಸರ್ಕಾರದಿಂದ ಇದುವರೆವಿಗೂ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಯು.ಜಿ.ಡಿ. ಯೋಜನೆಯ ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು;

(ಈ) ಈ ಕಾಮಗಾರಿ ವಿಳಂಬದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ತ್ವರಿತವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು;